ಕಂದಾಯ ಇಲಾಖೆ ಆಡಳಿತ ಸುಧಾರಣೆ ಕ್ರಮಗಳು.

2340(2831) ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) :— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶ್ರೀಹಾರನಹಳ್ಳಿ ರಾಮಸ್ವಾಮಿ ನೇತೃತ್ವದ ಆಡಳಿತ ಸುಧಾರಣಾ ಸಮಿತಿ ನೀಡಿರುವ ವರದಿಯಲ್ಲಿ ತಿಳಿಸಿರುವ ಪ್ರಕಾರ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಕಂದಾಯ ಇಲಾಖೆಗೆ ಸಂಬಂಧಪಟ್ಟಂತೆ ಸುಧಾರಣಾ ಕ್ರಮಗಳನ್ನೇನಾದರೂ ಪ್ರಸ್ತಾಪಿಸಲಾಗಿದೆಯೇ

ಆ) ಹಾಗಿದ್ದಲ್ಲಿ ಇದನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಇದನ್ನು ಯಾವಾಗ ಜಾರಿಗೆ ತರಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :—

ಅ) ಹೌದು.

ಆ) ಆಡಳಿತ ಸುಧಾರಣಾ ಆಯೋಗದ ಮಧ್ಯಂತರ ವರದಿಯನ್ನು ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಉಪ ಸಮಿತಿಯು ಶಿಫಾರಸ್ಸುಗಳನ್ನು ಪರಿಶೀಲಿಸುತ್ತಿದೆ.

ದೇವಸ್ಥಾನಗಳ ನಿಗಮ ಸ್ಥಾಪನೆ.

2341(2850) ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) :— ಮಾನ್ಯ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ವಕ್ಫ್ ಬೋರ್ಡ್ ಮಾದರಿಯಲ್ಲಿ ರಾಜ್ಯದಲ್ಲಿರುವ ಎಲ್ಲಾ ಪ್ರಮುಖ ದೇವಾಲಯಗಳ ನಿಗಮ ಒಂದನ್ನು ಸ್ಥಾಪಿಸಿ ಆದಾಯ ಕ್ರೋಢೀಕರಿಸಿ ಸಣ್ಣ ಮತ್ತು ದೊಡ್ಡ ದೇವಾಲಯಗಳ ನಿರ್ವಹಣೆ ಹಾಗೂ ಕಾರ್ಯನಿರ್ವಹಣೆಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

2. ಇದನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು?

ಶ್ರೀ ಬಾಬುರಾವ್ ಚಿಂಚನಸೂರು (ಮುಜರಾಯಿ ಸಚಿವರು) :—

1. ರಾಜ್ಯದಲ್ಲಿನ ಮುಜರಾಯಿ ದೇವಾಲಯಗಳ ಆಡಳಿತ ನಿರ್ವಹಣೆಗಾಗಿ ಈಗಾಗಲೇ ಏಕರೂಪ ಶಾಸನವನ್ನು ರೂಪಿಸಿದ್ದು ಅದನ್ನು ರಾಜ್ಯದ ಉಭಯ